CC 640-2020

PW-1

ಸಾಕ್ಷಿಯನ್ನು ಕರೆಯಿಸಿ ಪ್ರಮಾಚ ವಚನ ಭೋದಿಸಲಾಯಿತು. ದಿಃ **18-09-2021**

**ಮುಖ್ಯ ವಿಚಾರಣೆಃ ಶ್ರೀ ಹೆಚ್ ಆರ್ ಕೆ ವಕೀಲರಿಂದಃ**

ನಾನು ಈ ಪ್ರಕರಣದಲ್ಲಿ ಪಿರ್ಯಾದಿ ಸಂಸ್ಥೆಯ ಅಧಿಕೃತ ಸಿಬ್ಬಂದಿಯಾಗಿರುತ್ತೇನೆ. ನನ್ನ ಮುಖ್ಯ ವಿಚಾರಣೆಯ ಬದಲಾಗಿ ಪ್ರಮಾಣೀಕರಿಸಿದ ಶಪಥ ಪತ್ರವನ್ನು ಹಾಜರುಪಡಿಸಿದ್ದುದ್ದು, ಅದನ್ನು ನನ್ನ ಸಾಕ್ಷ್ಯವನ್ನಾಗಿ ಪರಿಗಣಿಸಬೇಕೆಂದು ಕೋರುತ್ತೇನೆ. ಶಪಥ ಪತ್ರದಲ್ಲಿ ಬರೆಸಿದ ಎಲ್ಲಾ ವಿಷಯಗಳು ಸತ್ಯ ಮತ್ತು ಸರಿ ಇದ್ದು, ಅದನ್ನು ಓದಿ ತಿಳಿದುಕೊಂಡು ಸರಿ ಇರುತ್ತದೆ ಎಂದು ಸಹಿ ಮಾಡಿರುತ್ತೇನೆ. ಪಿಡಬ್ಲ್ಯೂ-1 ಎಂದು ವಿಚಾರಿಸಲಾಯಿತು.

2. ಆರೋಪಿ ನೀಡಿದ ಮೂಲ ಚೆಕ್ಕನ್ನು ಹಾಜರುಪಡಿಸಿದ್ದು, ಅದನ್ನು ನಿಪಿ-1 ಎಂದು ಗುರುತಿಸಲಾಯಿತು. ಅದರ ಮೇಲೆ ಇರುವ ಆರೋಪಿಯ ಸಹಿಯನ್ನು ನಿಪಿ-1 (ಎ) ಎಂದು, ಬ್ಯಾಂಕಿನವರು ನೀಡಿದ ಹಿಂಬರಹ ಹಾಜರುಪಡಿಸಿದ್ದು, ಅದನ್ನು ನಿಪಿ-2 ಎಂದು, ವಕೀಲರ ನೋಟಿಸಿನ ಕಚೇರಿ ಪ್ರತಿಯನ್ನು ಹಾಜರುಪಡಿಸಿದ್ದು, ಅದನ್ನು ನಿಪಿ-3 ಎಂದು, ಅಂಚೆ ಕಚೇರಿಯ ರಶೀದಿಯನ್ನು ಹಾಜರುಪಡಿಸಿದ್ದು, ಅದನ್ನು ನಿಪಿ-4 ಎಂದು, ವಾಪಾಸ್ಸಾದ ಅಂಚೆ ಲಕೋಟೆಯನ್ನು ಹಾಜರುಪಡಿಸಿದ್ದು, ಅದನ್ನು ನಿಪಿ-5 ಎಂದು ಎಂದು ಗುರುತಿಸಲಾಯಿತು. (ಸದರಿ ಅಂಚೆ ಲಕೋಟೆಯನ್ನು ನ್ಯಾಯಾಲಯದ ಮುಂದೆ ತೆರೆದು) ಅದರಲ್ಲಿರುವ ನೋಟಿಸನ್ನು ನಿಪಿ-5(ಎ) ಎಂದು, ಆಡಳಿತ ಮಂಡಳಿಯ ಸಭೆಯ ನಡವಳಿಯನ್ನು ಹಾಜರುಪಡಿಸಿದ್ದು, ಅದನ್ನು ಆರೋಪಿ ಪರ ವಕೀಲರ ತಕರಾರಿಗೆ ಒಳಪಟ್ಟು ನಿಪಿ-6 ಎಂದು ಗುರುತಿಸಲಾಯಿತು.

ಪಿರ್ಯಾದಿ ಸಂಸ್ಥೆಗೆ ಆರೋಪಿಯು ನೀಡಿದ ಸಾಲದ ಅರ್ಜಿಯ ದೃಢೀಕೃತ ನಕಲನ್ನು ಹಾಜರುಪಡಿಸಿದ್ದು, ಆರೋಪಿ ಪರ ವಕೀಲರು ಮೂಲ ಅರ್ಜಿಯನ್ನು ನ್ಯಾಯಾಲಯಕ್ಕೆ ಸಲ್ಲಿಸಿರುವುದಿಲ್ಲ ಎಂದು ತಕರಾರು ಮಾಡಿದ್ದು, ತಕರಾರಿಗೆ ಒಳಪಟ್ಟು ಅದನ್ನು ನಿಪಿ-7 ಎಂದು ಗುರುತಿಸಲಾಯಿತು. ಸಾಕ್ಷಿಯು ಆರೋಪಿ ಸಲ್ಲಿಸಿದ ಪ್ರೊನೋಟಿನ ದೃಢೀಕೃತ ನಕಲನ್ನು ಹಾಜರುಪಡಿಸಿದ್ದು, ಅದನ್ನು ನಿಪಿ-8 ಎಂದು, ಬಾಂಡಿನ ದೃಢೀಕೃತ ನಕಲನ್ನು ಹಾಜರುಪಡಿಸಿದ್ದು, ಅದನ್ನು ನಿಪಿ-9 ಎಂದು ಗುರುತಿಸಲಾಯಿತು. ನನ್ನ ಪಿರ್ಯಾದನ್ನು ಪರಿಗಣಿಸಿ ಆರೋಪಿಯ ವಿರುದ್ಧ ಸೂಕ್ತ ಕಾನೂನು ಕ್ರಮ ಕೈಗೊಳ್ಳಬೇಕೆಂದು ಪ್ರಾರ್ಥಿಸುತ್ತೇನೆ.

ಈ ಹಂತದಲ್ಲಿ ಆರೋಪಿ ಪರ ವಕೀಲರು ಕಲಂ 145 ಎನ್.ಐ. ಆ್ಯಕ್ಟ್ ಅಡಿಯಲ್ಲಿ ಅರ್ಜಿಯನ್ನು ಸಲ್ಲಿಸಿ ಪಾಟೀ ಸವಾಲು ಮಾಡಲು ಅವಕಾಶ ಕೊಡಬೇಕೆಂದು ಕೇಳಿದ ಕಾರಣ ಕೇಸನ್ನು ಪಾಟೀ ಸವಾಲಿಗೆ ಇರಿಸಲಾಗಿದೆ.

**ಪಾಟೀ ಸವಾಲುಃ** ಶ್ರೀ ಬಿ ಎಮ್ ಎಸ್ ವಕೀಲರು ಸಮಯ ಕೋರಿದ್ದು, ಸಮಯಾವಕಾಶ ನೀಡಲಾಯಿತು.

ನನ್ನ ಉಕ್ತಲೇಖನಾ ರೀತ್ಯಾ ಬಹಿರಂಗ ನ್ಯಾಯಾಲಯದಲ್ಲಿ ಬೆರಳಚ್ಚು ಮಾಡಲಾಯಿತು.

ಓದಿ ಹೇಳಿ ಕೇಳಿ ಸರಿ ಇದೆ.

ಪ್ರ.ಸಿ.ನ್ಯಾ. ಮತ್ತು ಪ್ರ.ದ.ನ್ಯಾ.ದಂ., ಕಾರ್ಕಳ